ಕನ್ನಡಪ್ರಭ
ಗುರುವಾರ 7.05.2026

ಗರಿಷ್ಠ 34°c ಕನಿಷ್ಠ 23°c

ಸುದ್ದಿ ಸಿಂಚನ

ದನದ ಕೊಟ್ಟಿಗೆಗೆ ಬೆಂಕಿ: 3 ಹಸು ರಕ್ಷಣೆ



ಶಿರಸಿ: ತಾಲೂಕಿನ ತೆಪ್ಪಾರ ಗ್ರಾಪಂನ ಹಿರೇಮನೆ ಗ್ರಾಮದಲ್ಲಿ ಬುಧವಾರ ಬೆಳಗಿನ ಜಾವ ದನದ ಕೊಟ್ಟಿಗೆಯಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಅಗ್ನಿಶಾಮಕ ದಳದ ಸಿಬ್ಬಂದಿ 3 ಹಸುಗಳನ್ನು ರಕ್ಷಿಸಿದ್ದಾರೆ. ನಾರಾಯಣ ಸಣ್ಣ ಬಡಗಿ ಎಂಬವರ ಮನೆಯ ದನದ ಕೊಟ್ಟಿಗೆಯಲ್ಲಿ ಬೆಂಕಿ ಕಾಣಿಸಿಕೊಂಡಿತ್ತು. ಸುದ್ದಿ ತಿಳಿದ ತಕ್ಷಣ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಸತತ 2 ಗಂಟೆಗಳಿಂದ ಕಾರ್ಯಾಚರಣೆ ನಡೆಸಿ 3 ಹಸುಗಳನ್ನು ರಕ್ಷಿಸಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಕಾರ್ಯಾಚರಣೆಯಲ್ಲಿ ಅಗ್ನಿಶಾಮಕ ದಳದ ಠಾಣಾಧಿಕಾರಿ ರಾಜೇಶ ರಾಣೆ, ಸಿಬ್ಬಂದಿಗಳಾದ ವಿನಾಯಕ, ಧನಂಜಾ, ಜುಬೇರ್, ಬಸವರಾಜ, ಮಂಜು ಕೆ.ಸಿ. ಪಾಲ್ಗೊಂಡಿದ್ದರು.

ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಸೇರ್ಪಡೆ

ಯಲ್ಲಾಪುರ: ಹಿತ್ಲಳ್ಳಿ ಗ್ರಾಪಂ ವ್ಯಾಪ್ತಿಯ ಇಳ್ಳೆಹಳ್ಳಿ ಗ್ರಾಮದಲ್ಲಿ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಸೇರ್ಪಡೆಗೊಂಡರು. ಕೆಪಿಸಿಸಿ ಸದಸ್ಯ ವಿವೇಕ ಹೆಬ್ಬಾರ ಅವರನ್ನು ಪಕ್ಷದ ಶಾಲು ಹಾಕಿ ಬರಮಾಡಿಕೊಂಡರು. ದಿನೇಶ ಕುಣಬಿ, ಬಾಲಚಂದ್ರ ಕುಣಬಿ, ಗಣಪತಿ ಕುಣಬಿ, ನಾರಾಯಣ ಕುಣಬಿ, ಈರಪ್ಪ ಬೋವಿವಡ್ಡರ್, ಸತೀಶ ಕುಣಬಿ, ಕೃಷ್ಣ ಕುಣಬಿ, ಕೃಷ್ಣ ಬಿ. ಗೌಡ ಸೇರಿದಂತೆ ಅನೇಕರು ಸೇರ್ಪಡೆಗೊಂಡರು. ಈ ಸಂದರ್ಭ ಬ್ಲಾಕ್ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ವಿ.ಎಸ್. ಭಟ್ಟ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎನ್.ಕೆ. ಭಟ್ಟ, ಡಾ. ರವಿ ಭಟ್ಟ ಬರಗದ್ದೆ, ಬ್ಲಾಕ್ ಪ್ರಧಾನ ಕಾರ್ಯದರ್ಶಿ ಡಿ.ಡಿ. ನಾಯ್ಕ, ಹಿಂದುಳಿದ ವರ್ಗದ ಜಿಲ್ಲಾ ಉಪಾಧ್ಯಕ್ಷ ಪ್ರೇಮಾನಂದ ನಾಯ್ಕ, ತಾಲೂಕಾ ಪ್ರಚಾರ ಸಮಿತಿಯ ಅಧ್ಯಕ್ಷ ನರಸಿಂಹ ನಾಯ್ಕ, ಘಟಕಾಧ್ಯಕ್ಷ ಶೇಖರ ಸಿದ್ದಿ, ಸ್ಥಳೀಯ ಮುಖಂಡರಾದ ನಾಗೇಂದ್ರ ಹೆಗಡೆ ಹರಿಗದ್ದೆ, ಆರ್.ಬಿ. ರಾಯ್ಕರ್, ತಾಪಂ ಮಾಜಿ ಉಪಾಧ್ಯಕ್ಷೆ ಸುಜಾತಾ ಸಿದ್ದಿ, ತಾಪಂ ಮಾಜಿ ಸದಸ್ಯೆ ರಾಧಾ ಹೆಗಡೆ, ಯುವ ಕಾಂಗ್ರೆಸ್ ಕ್ಷೇತ್ರಾಧ್ಯಕ್ಷ ವಿಶ್ವಾಸ್ ನಾಯ್ಕ, ತಾಲೂಕಾಧ್ಯಕ್ಷ ಗಣೇಶ ಹೆಗಡೆ ಸೇರಿದಂತೆ ಪ್ರಮುಖರಿದ್ದರು.

ಮುಂಡಗೋಡ-ಬೆಂಗಳೂರು ರಾತ್ರಿ ಬಸ್ ಸೇವೆ ಆರಂಭ



ಮುಂಡಗೋಡ: ಮುಂಡಗೋಡ ಘಟಕದಿಂದ ರಾಜಧಾನಿ ಬೆಂಗಳೂರಿಗೆ ರಾತ್ರಿ 8 ಗಂಟೆಗೆ ಬಸ್ ಸೇವೆ ಆರಂಭಿಸಲಾಗಿದೆ. ಗ್ಯಾರಂಟಿ ಯೋಜನೆ ಸದಸ್ಯೆ ಶಾರದಾ ರಾಠೋಡ ಇಲ್ಲಿಯ ಬಸ್ ನಿಲ್ದಾಣದಲ್ಲಿ ಹಸಿರು ಬಾವುಟ ತೋರಿಸುವ ಮೂಲಕ ಬಸ್ ಸೇವೆಗೆ ಚಾಲನೆ ನೀಡಿದರು. ಈ ಸಂದರ್ಭ ಮುಂಡಗೋಡ ಡಿಪೋ ಮ್ಯಾನೇಜರ್, ಎಸ್.ಎಂ. ಕುರ್ತಕೋಟಿ, ಸಾರಿಗೆ ಇಲಾಖೆ ಅಧಿಕಾರಿ, ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ಪ್ರತಿ ದಿನ ರಾತ್ರಿ 8 ಗಂಟೆಗೆ ಬಸ್ ಮುಂಡಗೋಡನಿಂದ ಹೊರಟು ಬಂಕಾಪುರ-ಹಾವೇರಿ-ರಾಣೆಬೆನ್ನೂರ-ದಾವಣಗೆರೆ ಮಾರ್ಗವಾಗಿ ಸಂಚರಿಸಿ ಬೆಳಗ್ಗೆ 5ಕ್ಕೆ ಬೆಂಗಳೂರು ತಲುಪಲಿದೆ.



ಯಲ್ಲಾಪುರದ ಹಿತ್ಲಳ್ಳಿ ಗ್ರಾಪಂ ವ್ಯಾಪ್ತಿಯ ಇಳ್ಳೆಹಳ್ಳಿ ಗ್ರಾಮದಲ್ಲಿ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಸೇರ್ಪಡೆಗೊಂಡರು. ಈ ವೇಳೆ ಕೆಪಿಸಿಸಿ ಸದಸ್ಯ ವಿವೇಕ ಹೆಬ್ಬಾರ ಅವರನ್ನು ಪಕ್ಷದ ಶಾಲು ಹಾಕಿ ಬರಮಾಡಿಕೊಂಡರು.



ಹೊನ್ನಾವರ ತಾಲೂಕು ಬಿಜೆಪಿ ಕಚೇರಿಯಲ್ಲಿ ಬಿಎಸ್ ವೈ ಅಭಿಮಾನೋತ್ಸವ ಕಾರ್ಯಕ್ರಮದ ಆಮಂತ್ರಣ ಪತ್ರಿಕೆ ಬಿಡುಗಡೆಗೊಳಿಸಲಾಯಿತು. ಈ ವೇಳೆ ಮಾಜಿ ಸಚಿವ ಶಿವಾನಂದ ನಾಯ್ಕ, ಜಿಲ್ಲಾ ಉಪಾಧ್ಯಕ್ಷ ಜಿ.ಎಸ್. ಗುನಗ, ದೀಪಕ್ ನಾಯ್ಕ ಮತ್ತಿತರರು ಇದ್ದರು.

ಬಿಎಸ್‌ವೈ ಅಭಿಮಾನೋತ್ಸವ ಕಾರ್ಯಕ್ರಮದ ಆಮಂತ್ರಣ ಪತ್ರಿಕೆ ಬಿಡುಗಡೆ

• **ಕನ್ನಡಪ್ರಭ ವಾರ್ತೆ** ಹೊನ್ನಾವರ

ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಜನಸೇವೆಗೆ ಬಂದು ಸಾರ್ಥಕ 50 ವರ್ಷ ಕಳೆದಿದ್ದು, ಇದರ ಸಂಭ್ರಮಾಚರಣೆ ಚಿತ್ರದುರ್ಗದಲ್ಲಿ ಮೇ 9ರಂದು ನಡೆಯಲಿದೆ. ಈ ಹಿನ್ನೆಲೆ ಉತ್ತರ ಕನ್ನಡ ಜಿಲ್ಲೆಯಿಂದ ಸುಮಾರು 5 ಸಾವಿರ ಜನರು ತೆರಳಲು ನಿರ್ಧರಿಸಿದ್ದೇವೆ ಬಿಜೆಪಿ ಜಿಲ್ಲಾಧ್ಯಕ್ಷ ಎನ್.ಎಸ್. ಹೆಗಡೆ ತಿಳಿಸಿದರು.

ತಾಲೂಕು ಬಿಜೆಪಿ ಕಚೇರಿಯಲ್ಲಿ ಬಿಎಸ್ ವೈ ಅಭಿಮಾನೋತ್ಸವ ಕಾರ್ಯಕ್ರಮದ ಆಮಂತ್ರಣ ಪತ್ರಿಕೆ ಬಿಡುಗಡೆಗೊಳಿಸಿ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಇದೇ ವೇಳೆ ಮಾಜಿ ಸಚಿವ ಶಿವಾನಂದ ನಾಯ್ಕ, ಜಿಲ್ಲಾ ಉಪಾಧ್ಯಕ್ಷ ಜಿ.ಎಸ್. ಗುನಗ, ದೀಪಕ್ ನಾಯ್ಕ, ಶಿವಾನಂದ ಹೆಗಡೆ, ರಾಜೇಶ ಬಂಢಾರಿ, ಯೋಗೀಶ ಮೇಸ್ತ, ರಾಜೇಂದ್ರ ನಾಯ್ಕ, ಪ್ರಮೋದ ನಾಯ್ಕ, ಗಣೇಶ್ ಹಳ್ಳೆರ, ಮಂಜುನಾಥ್ ಗೌಡ, ವಿಘ್ನೇಶ್ವರ ಹೆಗಡೆ ಹಾಗೂ ಬಿಜೆಪಿ ಪದಾಧಿಕಾರಿಗಳು ಇದ್ದರು.

ಕೈಗಾ-ಇಳಕಲ್ ಸಿಮೆಂಟ್ ರಸ್ತೆಗೆ ಹಾಕಲಾಗಿದ್ದ ಡಾಂಬರು ತೆರವು

ಸಾರ್ವಜನಿಕರಿಂದ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಕ್ರಮ



ಗುತ್ತಿಗೆದಾರನ ಸಿಬ್ಬಂದಿ ಡಾಂಬರು ಹಾಕುವ ಕಾಮಗಾರಿಯನ್ನು ಇತ್ತೀಚೆಗೆ ಕೈಗೊಂಡಿದ್ದರು.

- ಕೇವಲ ಎರಡು ವರ್ಷಗಳ ಹಿಂದಷ್ಟೇ ನಿರ್ಮಿಸಲಾಗಿರುವ ಸಿಮೆಂಟ್ ರಸ್ತೆಯ ಮೇಲೆ ಏಕಾಏಕಿ ಡಾಂಬರು ಹಾಕಲು ಮುಂದಾಗಿದ್ದು ಸಾರ್ವಜನಿಕರ ತೆರಿಗೆ ಹಣವನ್ನು ಪೋಲು ಮಾಡಲಾಗುತ್ತಿದೆ ಎಂದು ಸ್ಥಳೀಯರ ಆಕ್ರೋಶ
- ಈ ಬಗ್ಗೆ ಶಾಸಕ ಸತೀಶ್ ಸೈಲ್ ಅವರಿಗೂ ದೂರಿದ ಹಿನ್ನಲೆ, ಕಾಮಗಾರಿ ಸ್ಥಗಿತಗೊಳಿಸುವಂತೆ ಸೂಚನೆ ನೀಡಲಾಯಿತು

• **ಕನ್ನಡಪ್ರಭ ವಾರ್ತೆ** ಕಾರವಾರ

ನಗರದ ಗೀತಾಂಜಲಿ ಸರ್ಕಲ್‌ನಿಂದ ಇಸ್ಕಾನ್ ಮಂದಿರದವರೆಗೆ ಹಾದು ಹೋಗಿರುವ ಕೈಗಾ-ಇಳಕಲ್ ರಾಜ್ಯ ಹೆದ್ದಾರಿಯ ಸಿಮೆಂಟ್ ರಸ್ತೆಯ ಮೇಲೆ ಹಾಕಲಾಗಿದ್ದ ಡಾಂಬರನ್ನು ಬುಧವಾರ ತೆರವುಗೊಳಿಸುವ ಕಾರ್ಯ ಮಾಡಲಾಯಿತು.

ಸುಸಜ್ಜಿತವಾಗಿರುವ ಕಾಂಕ್ರಿಟ್ ರಸ್ತೆಯ ಮೇಲೆ ಮಂಗಳವಾರ ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ದಿ ಯೋಜನೆ(ಕೆಶಿಪ್) ಇಲಾಖೆಯಿಂದ ಗುತ್ತಿಗೆ ಪಡೆದಿದ್ದ ವಿಜಯಪುರ ಜಿಲ್ಲೆ ಮೂಲದ ಆಲೂರು ಎನ್ನುವ ಗುತ್ತಿಗೆದಾರನ ಸಿಬ್ಬಂದಿ ಡಾಂಬರು ಹಾಕುವ ಕಾಮಗಾರಿಯನ್ನು ಕೈಗೊಂಡಿದ್ದರು. ಚೆನ್ನಾಗಿರುವ ಸಿಮೆಂಟ್ ರಸ್ತೆಯ ಮೇಲೆ ಏಕಾಏಕಿ 2 ರಿಂದ 3 ಇಂಚು ದಪ್ಪ ಡಾಂಬರೀಕರಣ ಕಾರ್ಯವನ್ನು ಕೈಗೊಂಡಿದ್ದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದ್ದು, ಸುಸಜ್ಜಿತ ಸಿಮೆಂಟ್ ರಸ್ತೆಯ ಮೇಲೆ ಅವೈಜ್ಞಾನಿಕ ಕಾಮಗಾರಿ ಮಾಡಲು ಮುಂದಾಗಿದ್ದಕ್ಕೆ ಸಾಕಷ್ಟು ವಿರೋಧ ವ್ಯಕ್ತವಾಗಿತ್ತು.

ಕೇವಲ ಎರಡು ವರ್ಷಗಳ ಹಿಂದಷ್ಟೇ ನಿರ್ಮಿಸಲಾಗಿರುವ ಸಿಮೆಂಟ್ ರಸ್ತೆಯ ಮೇಲೆ ಏಕಾಏಕಿ ಡಾಂಬರು ಹಾಕಲು ಮುಂದಾಗಿದ್ದು ಸಾರ್ವಜನಿಕರ ತೆರಿಗೆ ಹಣವನ್ನು ಪೋಲು ಮಾಡಲಾಗುತ್ತಿದೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದರು. ಅಲ್ಲದೇ ಈ ಬಗ್ಗೆ ಶಾಸಕ ಸತೀಶ್ ಸೈಲ್ ಅವರಿಗೂ ದೂರಿದ ಹಿನ್ನಲೆ, ಕಾಮಗಾರಿ ಸ್ಥಗಿತಗೊಳಿಸುವಂತೆ ಸೂಚನೆ ನೀಡಲಾಗಿತ್ತು.

ಅಲ್ಲದೇ ಲೋಕೋಪಯೋಗಿ ಇಲಾಖೆ ಗಮನಕ್ಕೆ ತರದೇ, ಅನುಮತಿಯನ್ನೂ ಪಡೆಯದೇ ಸಿಮೆಂಟ್ ರಸ್ತೆಯ ಮೇಲೆ ಡಾಂಬರೀಕರಣ ಕಾರ್ಯ ಕೈಗೊಳ್ಳಲಾಗಿತ್ತು. ಈ ಹಿನ್ನಲೆ ಲೋಕೋಪಯೋಗಿ ಇಲಾಖೆ ಮುಖ್ಯ ಅಭಿಯಂತರರಾದ ಮಲ್ಲಿಕಾರ್ಜುನ್ ಅವರು ಕೆಲಸ ನಿಲ್ಲಿಸುವಂತೆ ಸೂಚಿಸಿದ್ದಲ್ಲದೇ, ಸಿಮೆಂಟ್ ರಸ್ತೆ ಮೇಲೆ ಹಾಕಲಾದ ಡಾಂಬರನ್ನು ಸಹ ತೆರವುಗೊಳಿಸಿ ರಸ್ತೆ ಸರಿಪಡಿಸುವಂತೆ ಸೂಚನೆ ನೀಡಿದ್ದರು. ಈ ಹಿನ್ನಲೆ ಗುತ್ತಿಗೆದಾರರು ಬುಧವಾರ ಆಗಮಿಸಿ ಸಿಮೆಂಟ್ ರಸ್ತೆಯ ಮೇಲೆ ಹಾಕಲಾಗಿದ್ದ ಡಾಂಬರನ್ನು ಜೆಸಿಬಿ ಮೂಲಕ ಕಿತ್ತು ತೆರವುಗೊಳಿಸಿದರು.

ಇನ್ನು ಈ ತೆರವು ಕಾರ್ಯದಿಂದಾಗಿ ಚೆನ್ನಾಗಿದ್ದ ಸಿಮೆಂಟ್ ರಸ್ತೆಯ ಮೇಲೆ ಜೆಸಿಬಿ ಯಂತ್ರ ಕೆರೆದು ಹಾನಿಗೊಳಿಸಿದ್ದು, ಅನಗತ್ಯವಾಗಿ, ಪೂರ್ವ ಪರಿಶೀಲನೆ ನಡೆಸದೇ ಅವೈಜ್ಞಾನಿಕ ಕಾಮಗಾರಿಗೆ ಮುಂದಾಗಿದ್ದ ಗುತ್ತಿಗೆದಾರನಿಗೆ ಸಾರ್ವಜನಿಕರು, ವಾಹನ ಸವಾರರು ಹಿಡಿಶಾಪ ಹಾಕುವಂತಾಗಿದೆ.

ಕಾಮಗಾರಿ ಆರಂಭಕ್ಕೆ ಮುನ್ನ ಸೂಕ್ತ ಪರಿಶೀಲನೆ ನಡೆಸಿದ್ದಲ್ಲಿ ಈ ರೀತಿ ಡಾಂಬರು ಹಾಳುಮಾಡುವ ಅನಿವಾರ್ಯತೆ ಎದುರಾಗುತ್ತಿರಲಿಲ್ಲ ಎನ್ನಲಾಗಿದ್ದು,, ಈ ಅವೈಜ್ಞಾನಿಕ ಕಾಮಗಾರಿಯಿಂದಾಗಿ ಗುತ್ತಿಗೆದಾರ ಲಕ್ಷಾಂತರ ರೂಪಾಯಿ ನಷ್ಟ ಅನುಭವಿಸುವಂತಾಗಿದೆ.

ಆರೋಗ್ಯ ಸೌಲಭ್ಯ ಮನೆ ಮನೆಗೆ ತಲುಪಿಸಿ

ಪುನರ್ ರಚನೆ ಕಾರ್ಯಕ್ರಮದಲ್ಲಿ ಎಂ.ಆರ್. ಹೆಗಡೆ



ಆರೋಗ್ಯ ಭಾರತಿ ಯಲ್ಲಾಪುರ ತಾಲೂಕು ಸಮಿತಿಯ ಪುನರ್ ರಚನೆ ಕಾರ್ಯಕ್ರಮ ಉದ್ಘಾಟಿಸಲಾಯಿತು.

• **ಕನ್ನಡಪ್ರಭ ವಾರ್ತೆ** ಯಲ್ಲಾಪುರ

ಭೌಗೋಳಿಕವಾಗಿ ಅತ್ಯಂತ ದುರ್ಗಮ ಹಳ್ಳಿಗಳನ್ನು ಹೊಂದಿರುವ ಯಲ್ಲಾಪುರ ತಾಲೂಕಿನಲ್ಲಿ ಆರೋಗ್ಯ ಸೌಲಭ್ಯಗಳನ್ನು ಮನೆ ಮನೆಗೆ ತಲುಪಿಸುವುದು ಮಹತ್ವದ್ದಾಗಿದೆ ಎಂದು ಮಲೆನಾಡು ಕೃಷಿ ಅಭಿವೃದ್ಧಿ ಸಹಕಾರಿ ಸಂಘದ ಅಧ್ಯಕ್ಷ ಎಂ.ಆರ್. ಹೆಗಡೆ ಕುಂಬ್ರಿಗುಡ್ಡೆ ಹೇಳಿದರು.

ಟಿ.ಎಂ.ಎಸ್. ಸಭಾಭವನದಲ್ಲಿ ನಡೆದ ಆರೋಗ್ಯ ಭಾರತಿ ಯಲ್ಲಾಪುರ ತಾಲೂಕು ಸಮಿತಿಯ ಪುನರ್‌ರಚನೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಸ್ವಸ್ಥ ಪರಿವಾರದ ಕಲ್ಪನೆ ಹೊಂದಿರುವ ಆರೋಗ್ಯ ಭಾರತಿಯ ಕಾರ್ಯ ಪ್ರಶಂಸನೀಯ ಎಂದರು. ತಾಲೂಕಾ ಆರೋಗ್ಯಾಧಿಕಾರಿ ಡಾ. ನರೇಂದ್ರ ಪವಾರ್, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಯೋಜನಾಧಿಕಾರಿ ಸಂತೋಷ್ ಎ.ಎಸ್. ಮಾತನಾಡಿದರು. ಆನಗೋಡ ಸೇವಾ ಸಹಕಾರಿ ಸಂಘದ ಅಧ್ಯಕ್ಷ ನಾರಾಯಣ ಭಟ್ಟ ಅಗ್ಗಾಶಿಕುಂಬ್ರಿ ಅಧ್ಯಕ್ಷತೆ ವಹಿಸಿದ್ದರು. ಆರೋಗ್ಯ ಭಾರತಿ ಶಿರಸಿ ವಿಭಾಗದ ಸಹ ಸಂಯೋಜಕ ನಾಗೇಶ್ ಪಿ. ನೂತನ ಸಮಿತಿಯ ಘೋಷಣೆ ಮಾಡಿದರು.

ನೂತನ ಅಧ್ಯಕ್ಷರಾಗಿ ಎಸ್.ಟಿ.ಭಟ್ಟ, ಉಪಾಧ್ಯಕ್ಷರಾಗಿ ಡಾ. ನಾಗರಾಜ ಭಟ್ಟ, ಕಾರ್ಯದರ್ಶಿಯಾಗಿ ಶ್ರೀಪಾದ ಹೆಗಡೆ, ಸಹಕಾರ್ಯದರ್ಶಿಯಾಗಿ ಮಂಜುನಾಥ್. ಬಿ. ಶೇಟ್, ಮಹಿಳಾ ಪ್ರಮುಖರಾಗಿ ಗೌರಿ ನಂದೋಳ್ಳಿಮಠ್ ಆಯ್ಕೆಯಾದರು.

ಪ್ರಾರಂಭದಲ್ಲಿ ಆರೋಗ್ಯ ಭಾರತಿ ತಾಲೂಕಾ ಅಧ್ಯಕ್ಷ ಎಸ್.ಟಿ. ಭಟ್ಟ ಸ್ವಾಗತಿಸಿದರು. ಶಿರಸಿ ಜಿಲ್ಲಾ ಆರೋಗ್ಯ ಭಾರತಿಯ ಅಧ್ಯಕ್ಷ ಸುರೇಶ ಹೆಗಡೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ಶ್ರೀಪಾದ ಹೆಗಡೆ ಕಾರ್ಯಕ್ರಮ ನಿರೂಪಿದರು. ಸಹ ಕಾರ್ಯದರ್ಶಿ ಮಂಜುನಾಥ್ ಬಿ. ಶೇಟ್ ವಂದಿಸಿದರು. ಶಾಂತಿ ಮಂತ್ರದೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು.

ಕೃಷಿಕರು, ವ್ಯಾಪಾರಸ್ಥರು, ಸ್ವರ್ಣವಲ್ಲಿ ಮಾತೃ ಮಂಡಳಿ ಸದಸ್ಯರು, ಶ್ರೀ ಕ್ಷೇತ್ರ ಧರ್ಮಸ್ಥಳ ಸಂಘದ ಪದಾಧಿಕಾರಿಗಳು, ಸಂಘ ಪರಿವಾರದ ಪದಾಧಿಕಾರಿಗಳು, ದೈವಜ್ಞ ಸಮಾಜದ ಮುಖಂಡರು ಇನ್ನು ಹಲವಾರು ಸಂಘಟನೆಗಳ ಸದಸ್ಯರು ಪಾಲ್ಗೊಂಡಿದ್ದರು.

ಅಡ್ವಾನ್ಸ್ ಯೋಗ ಶಿಕ್ಷಕರ ತರಬೇತಿ ಶಿಬಿರ ಯಶಸ್ವಿ



ಅಡ್ವಾನ್ಸ್ ಯೋಗ ಶಿಕ್ಷಕರ ತರಬೇತಿ ಶಿಬಿರ ಜರುಗಿತು.

• **ಕನ್ನಡಪ್ರಭ ವಾರ್ತೆ** ಕಾರವಾರ

ನಗರದ ಪ್ರೀಮಿಯರ್‌ಎಜ್ಯುಕೇಶನ್ ಸೊಸೈಟಿ ನ್ಯೂ ಹೈಸ್ಕೂಲ್ ಬಾಡ ಆವರಣದಲ್ಲಿ ಪತಂಜಲಿ ಯೋಗ ಪರಿವಾರಕಾರವಾರದವತಿಯಿಂದಆಯೋಜಿಸಲಾಗಿದ್ದ 26 ದಿನಗಳ ಅಡ್ವಾನ್ಸ್ ಯೋಗ ಶಿಕ್ಷಕರ ತರಬೇತಿ ಶಿಬಿರವುಅತ್ಯಂತಯಶಸ್ವಿಯಾಗಿಮುಕ್ತಾಯಗೊಂಡಿತು. ಕರ್ನಾಟಕ ರಾಜ್ಯ ಅಂತಾರಾಷ್ಟ್ರೀಯ ಯೋಗಗುರು ಭವರಲಾಲ ಆರ್ಯ ಮಾರ್ಗದರ್ಶನದಲ್ಲಿಈ ಶಿಬಿರವು ಜರುಗಿತು. ಕಳೆದ 26 ದಿನಗಳ ಕಾಲ ನಡೆದ ಈ ಶಿಬಿರದಲ್ಲಿ ಪ್ರತಿದಿನ ಬೆಳಗ್ಗೆ ಮತ್ತು ಸಂಜೆ ಶಿಬಿರಾರ್ಥಿಗಳಿಗೆ ಕಠಿಣ ತರಬೇತಿ ನೀಡಲಾಯಿತು. ಕೇವಲ ಯೋಗಾಭ್ಯಾಸ ಮತ್ತು ಪ್ರಾಣಾಯಾಮಕ್ಕೆ ಸೀಮಿತವಾಗದೆ, ಆಯುರ್ವೇದ, ಪ್ರಕೃತಿ ಚಿಕಿತ್ಸಾ ವಿಧಾನಗಳು, ಅಕ್ಯುಪ್ರೆಶರ್, ಗಿಡಮೂಲಿಕೆಗಳ ಬಳಕೆ, ಮನೆಮದ್ದುಗಳು ಹಾಗೂ ಸಮತೋಲನ ಆಹಾರ ಪದ್ಧತಿಯ ಕುರಿತು ಅನುಭವೀ ಪತಂಜಲಿ ಯೋಗ ಶಿಕ್ಷಕರು ಸವಿಸ್ತಾರವಾದ ಜ್ಞಾನವನ್ನು ಉಣಬಡಿಸಿದರು. ಉದ್ಘಾಟನಾ ಹಾಗೂ ಸಮಾರೋಪ ಸಮಾರಂಭದಲ್ಲಿ ಪ್ರೀಮಿಯರ್‌ಎಜ್ಯುಕೇಶನ್ ಸೊಸೈಟಿ ಅಧ್ಯಕ್ಷ ಶಿವಾನಂದ ಕಾಮತ ಹಾಗೂ ನಗರಸಭೆ ಸದಸ್ಯ ಮನೋಜ ಬಾಂದೇಕರ ಪಾಲ್ಗೊಂಡು ಯೋಗದ ಮಹತ್ವವನ್ನು ವಿವರಿಸಿದರು. ಸಮಾರೋಪದಲ್ಲಿ ಅಂತಿಮ ಪರೀಕ್ಷೆಯಲ್ಲಿ ಉತ್ತೀರ್ಣರಾದ ಶಿಬಿರಾರ್ಥಿಗಳಿಗೆ ಅಧಿಕೃತ ಯೋಗ ಶಿಕ್ಷಕರ ಪ್ರಮಾಣಪತ್ರ ವಿತರಿಸಲಾಯಿತು. ಯೋಗ ಶಿಕ್ಷಕರಾದ ರಘುರಾಮ ಹೆಗಡೆ, ನಾಗೇಂದ್ರ ಭಟ್ಟ, ಜಿಲ್ಲಾ ಪ್ರಭಾರಿ ಶ್ರೀನಾಥ, ಜಿಲ್ಲಾ ಮಹಿಳಾ ಪ್ರಭಾರಿ ಚಿತ್ರಾ ನಾಯ್ಕ ಹಾಗೂ ತಾಲೂಕು ಮಹಿಳಾ ಪ್ರಭಾರಿ ಸುಮಾ ನಾಯ್ಕ ಇದ್ದರು. ಪೂರ್ಣಿಮಾ ನಿರೂಪಿಸಿ, ಶ್ರೀನಾಥ ವಂದಿಸಿದರು.

ಆಟೋ ನಿಲ್ದಾಣ ಕಾಮಗಾರಿಗೆ ಚಾಲನೆ

ಶಿರಸಿ: ಬಹುದಿನಗಳ ಬೇಡಿಕೆಯಾದ ನಗರದ ಕೇಂದ್ರ ಬಸ್ ನಿಲ್ದಾಣದ ಹತ್ತಿರವಿರುವ ಆಟೋ ರಿಕ್ಷಾ ನಿಲ್ದಾಣ ಕಾಮಗಾರಿಗೆ ಸೋಮವಾರ ಶಾಸಕ ಭೀಮಣ್ಣ ನಾಯ್ಕ ಚಾಲನೆ ನೀಡಿದರು. ನಂತರ ಮಾತನಾಡಿದ ಶಾಸಕರು, ಸುಮಾರು ದಿನಗಳಿಂದ ಮೂಲಭೂತ ಸೌಕರ್ಯಗಳ ಕೊರತೆಯಿಂದ ಪರದಾಡುತ್ತಿದ್ದ ಆಟೋ ಚಾಲಕರಿಗೆ, ಈ ನೂತನ ಕಾಮಗಾರಿಯಿಂದ ಅನುಕೂಲವಾಗಲಿದೆ. ಇದರ ಉಪಯೋಗವನ್ನು ನಗರದ ಆಟೋ ಚಾಲಕರು ಪಡೆದುಕೊಳ್ಳಬೇಕು ಎಂದು ಹೇಳಿದರು.

ಅಲ್ಲದೆ ಆಟೋ ಚಾಲಕರು ನಗರದ ಸಾರಿಗೆ ವ್ಯವಸ್ಥೆಯ ಬೆನ್ನೆಲುಬು. ಬಿಸಿಲು, ಮಳೆ ಎನ್ನದೇ ಸಾರ್ವಜನಿಕರಿಗೆ ಸೇವೆ ಸಲ್ಲಿಸುತ್ತಿರುವ ಆಟೋ ಚಾಲಕರಿಗೆ ಈ ಒಂದು ಕಾಮಗಾರಿಯ ಅವಶ್ಯಕತೆ ಇತ್ತು. ಈ ಬೇಡಿಕೆಯನ್ನು ಇಂದು ಈಡೇರಿಸಲಾಗಿದೆ ಎಂದರು. ನಂತರ ಆಟೋರಿಕ್ಷಾ ನಿಲ್ದಾಣದ ಕಾಮಗಾರಿಯು ಅತ್ಯಂತ ಗುಣಮಟ್ಟದಿಂದ ಕೂಡಿರಬೇಕು ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳ್ಳಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮತ್ತು ಗುತ್ತಿಗೆದಾರರಿಗೆ ಸ್ಥಳದಲ್ಲೇ ಸೂಚನೆ ನೀಡಿದರು. ಈ ಸಂದರ್ಭ ಸ್ಥಳೀಯ ನಗರಸಭೆ ಮಾಜಿ ಸದಸ್ಯರು, ಸಾರಿಗೆ ಇಲಾಖೆಯ ಅಧಿಕಾರಿಗಳು, ಆಟೋ ಚಾಲಕರ ಸಂಘದ ಪ್ರಮುಖರು, ಕಾಂಗ್ರೆಸ್ ಮುಖಂಡರು ಮುಖಂಡರು ಹಾಗೂ ನೂರಾರು ಆಟೋ ಚಾಲಕರು ಉಪಸ್ಥಿತರಿದ್ದರು.

ಅಪಘಾತ: ಸ್ಕೂಟರ್ ಸವಾರನಿಗೆ ಗಾಯ

• **ಕನ್ನಡಪ್ರಭ ವಾರ್ತೆ** ಕಾರವಾರ

ತಾಲೂಕಿನ ಅಮದಳ್ಳಿ ಸಮೀಪದ ರಾಷ್ಟ್ರೀಯ ಹೆದ್ದಾರಿ 66ರಲ್ಲಿ ಮಂಗಳವಾರ ಸಂಜೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಸ್ಕೂಟರ್‌ಸವಾರರೊಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಟಾಟಾ 407 ವಾಹನದ ಚಾಲಕನ ಅತಿವೇಗ ಹಾಗೂ ಅಜಾಗರೂಕತೆಯ ಚಾಲನೆಯೇ ಈ ಅವಘಡಕ್ಕೆ ಕಾರಣ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ಅಮದಳ್ಳಿಯ ಜಡಿಗದ್ದೆ ನಿವಾಸಿ ಡಿತೇಶ್ ಶ್ರೀಪಾದಬಾಂದೇಕರ(26) ಅಪಘಾತದಲ್ಲಿ ಗಾಯಗೊಂಡ ಯುವಕ. ಮೇ 5ರಂದು ಸಂಜೆ 5 ಗಂಟೆ ಸುಮಾರಿಗೆ ಡಿತೇಶ್ ತಮ್ಮ ಸ್ಕೂಟರ್‌ಮೂಲಕ ಅಮದಳ್ಳಿಯ ಹೊಸ ಚತುಷ್ಪಥ ರಸ್ತೆಯಲ್ಲಿ ಸಂಚರಿಸುತ್ತಿದ್ದರು. ಇದೇ ವೇಳೆ ಸಂದೇಶ್ ಸೀತಾರಾಮ ಚಿಂಚಣಕರ ಎಂಬಾತ ಚಲಾಯಿಸುತ್ತಿದ್ದ ಟಾಟಾ 407 ವಾಹನವು ಹೈದರಘಾಟ್ ಕ್ರಾಸ್ ಬಳಿ ಅಚಾನಕ್ ಆಗಿ ಬಲಕ್ಕೆ ತಿರುಗಿದೆ. ಇದರಿಂದಾಗಿ ಹಿಂಬದಿಯಿಂದ ಬರುತ್ತಿದ್ದ ಸ್ಕೂಟರ್‌ಗೆ ಡಿಕ್ಕಿ ಹೊಡೆದಿದೆ.

ಡಿಕ್ಕಿಯ ರಭಸಕ್ಕೆ ಸ್ಕೂಟರ್‌ನಿಂದ ಹಾರಿಬಿದ್ದ ಡಿತೇಶ್ ತಲೆಗೆ ಗಂಭೀರವಾದ ಪೆಟ್ಟು ಬಿದ್ದಿದೆ. ಅಲ್ಲದೆ ಎರಡೂ ಮೊಣಕಾಲು ಹಾಗೂ ಎಡ ಭುಜದ ಭಾಗಕ್ಕೂ ತೀವ್ರ ಸ್ವರೂಪದ ಗಾಯಗಳಾಗಿವೆ ಎಂದು ತಿಳಿದುಬಂದಿದೆ.

ಕಾರವಾರ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಜಗಳ ಬಿಡಿಸಲು ಹೋದವನ ಮೇಲೆ ಬ್ಯಾಟ್‌ನಿಂದ ಹಲ್ಲೆ

• **ಕನ್ನಡಪ್ರಭ ವಾರ್ತೆ** ಹೊನ್ನಾವರ

ತಾಲೂಕಿನ ಖರ್ವಾ ಗ್ರಾಮದ ವಲ್ಕಿ ಪ್ರದೇಶದಲ್ಲಿ ನಡೆಯುತ್ತಿದ್ದ ಸ್ಥಳೀಯ ಕ್ರಿಕೆಟ್ ಪಂದ್ಯವೊಂದರಲ್ಲಿ ಅಂಪೈರ್‌ತೀರ್ಪಿನ ವಿಚಾರವಾಗಿ ಶುರುವಾದ ವಾಗ್ವಾದ ವಿಕೋಪಕ್ಕೆ ತಿರುಗಿ, ಜಗಳ ಬಿಡಿಸಲು ಹೋದವನಿಗೆ ಬ್ಯಾಟ್‌ನಿಂದ ಮನಬಂದಂತೆ ಥಳಿಸಿರುವ ಘಟನೆ ಬೆಳಕಿಗೆ ಬಂದಿದೆ. ಈ ಸಂಬಂಧ ಹೊನ್ನಾವರ ಪೊಲೀಸ್ ಠಾಣೆಯಲ್ಲಿ ಇಬ್ಬರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಾಗಿದೆ.

ವಲ್ಕಿ ನಿವಾಸಿ, 58 ವರ್ಷದ ರೈತ ಶೇಖ್ ಮಹಮ್ಮದ್ ಜುಬೇರ ಹಲ್ಲೆಗೊಳಗಾದವರು. ದೂರಿನ ಮಾಹಿತಿಯ ಪ್ರಕಾರ ಮೇ 5ರ ಸಂಜೆ ಕೊಳಗದ್ದೆ ಶಾಲಾ ಮೈದಾನದಲ್ಲಿ ಕ್ರಿಕೆಟ್ ಪಂದ್ಯ ನಡೆಯುತ್ತಿತ್ತು. ಈ ವೇಳೆ ಆಟಗಾರ ಅಬ್ದುಲ್ ರೆಹಮಾನ್ ಎಂಬಾತ ಔಟಾಗಿದ್ದಾನೆ ಎಂದು ಅಂಪೈರ್‌ತೀರ್ಪು ನೀಡಿದ್ದರು. ಆದರೆ, ಈ ತೀರ್ಪಿಗೆ ವಿರೋಧ ವ್ಯಕ್ತಪಡಿಸಿದ ಸುಬಾನ್ ಖಾಜಾ ಫಕ್ರುದ್ದಿನ್ (24) ಹಾಗೂ ಮೇಹದಿ ಖಾಜಾ ಫಕ್ರುದಿನ್ (21) ಎಂಬ ಯುವಕರು ಮೈದಾನದಲ್ಲೇ ಅಂಪೈರ್‌ಜೊತೆ ವಾಗ್ವಾದಕ್ಕಿಳಿದಿದ್ದರು.

ಮೈದಾನದಲ್ಲಿ ಮಾತಿನ ಚಕಮಕಿ ಮಿತಿಮೀರುತ್ತಿರುವುದನ್ನು ಗಮನಿಸಿದ ಜುಬೇರ, ಜಗಳ ಬಿಡಿಸುವ ಉದ್ದೇಶದಿಂದ ಮಧ್ಯಪ್ರವೇಶಿಸಿದ್ದಾರೆ. ಅಂಪೈರ್‌ಸರಿಯಾದ ತೀರ್ಪನ್ನೇ ನೀಡಿದ್ದಾರೆ, ಸುಮ್ಮನೆ ಗಲಾಟೆ ಮಾಡಬೇಡಿ ಎಂದು ಬುದ್ಧಿವಾದ ಹೇಳಿದ್ದಾರೆ. ಇದರಿಂದ ಮತ್ತಷ್ಟು ರೊಚ್ಚಿಗೆದ್ದ ಆರೋಪಿಗಳು, ಅಂಪೈರ್‌ಮೇಲಿನ ಕೋಪವನ್ನು ಜುಬೇರ ಮೇಲೆ ತೀರಿಸಿಕೊಂಡಿದ್ದಾರೆ.

ಸಂಜೆ ಸುಮಾರು 4.45ರಿಂದ 4.50ರ ಸಮಯದಲ್ಲಿ ಜುಬೇರ ಅವರ ಮೇಲೆ ಏಕಾಏಕಿ ಮುಗಿಬಿದ್ದ ಆರೋಪಿಗಳಾದ ಸುಬಾನ್ ಮತ್ತು ಮೇಹದಿ, ತಮ್ಮ ಕೈಲಿದ್ದ ಕ್ರಿಕೆಟ್ ಬ್ಯಾಟ್‌ಗಳಿಂದಲೇ ಹಲ್ಲೆ ನಡೆಸಿದ್ದಾರೆ. ಸುಬಾನ್ ಬ್ಯಾಟ್‌ನಿಂದ ಜುಬೇರ ಅವರ ತಲೆಗೆ ಬಲವಾಗಿ ಹೊಡೆದು ಗಾಯಪಡಿಸಿದ್ದಾನೆ. ಮೇಹದಿ ಮತ್ತೊಂದು ಬ್ಯಾಟ್‌ನಿಂದ ಜುಬೇರ ಅವರ ಬೆನ್ನಿಗೆ ಹೊಡೆದು ತೀವ್ರ ನೋವುಂಟುಮಾಡಿದ್ದಾನೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಗಾಯಾಳು ಜುಬೇರ ನೀಡಿದ ದೂರಿನ ಆಧಾರದ ಮೇಲೆ ಹೊನ್ನಾವರ ಪೊಲೀಸರು ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಸಂಭ್ರಮ... ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿ ವಿಧಾನಸಭಾ ಚುನಾವಣೆಗಳಲ್ಲಿ ಬಿಜೆಪಿ ಗೆಲುವು

ಕಾರವಾರದಲ್ಲಿ ಸಿಹಿ ಹಂಚಿ ಸಂಭ್ರಮಿಸಿದ ಬಿಜೆಪಿ ಕಾರ್ಯಕರ್ತರು

• **ಕನ್ನಡಪ್ರಭ ವಾರ್ತೆ** ಕಾರವಾರ

ಪಶ್ಚಿಮ ಬಂಗಾಳ, ಅಸ್ಸಾಂ ಮತ್ತು ಪುದುಚೇರಿ ವಿಧಾನಸಭಾ ಚುನಾವಣೆಗಳಲ್ಲಿ ಬಿಜೆಪಿ ಹಾಗೂ ಎನ್‌ಡಿಎ ಮೈತ್ರಿಕೂಟ ಐತಿಹಾಸಿಕ ವಿಜಯ ಸಾಧಿಸಿದ ಹಿನ್ನೆಲೆ ಕಾರವಾರದಲ್ಲಿ ಬಿಜೆಪಿ ಕಾರ್ಯಕರ್ತರು ಭರ್ಜರಿ ವಿಜಯೋತ್ಸವ ಆಚರಿಸಿದರು. ನಗರದ ಪ್ರಮುಖ ಕೇಂದ್ರವಾದ ಸವಿತಾ ಸರ್ಕಲ್‌ನಲ್ಲಿ ಜಮಾಯಿಸಿದ ಕಾರ್ಯಕರ್ತರು, ಪರಸ್ಪರ ಸಿಹಿ ಹಂಚುವ ಮೂಲಕ ಸಂಭ್ರಮ ಹಂಚಿಕೊಂಡರು.

ರಾಜ್ಯ ಬಿಜೆಪಿ ಉಪಾಧ್ಯಕ್ಷೆ ಹಾಗೂ ಮಾಜಿ ಶಾಸಕಿ ರೂಪಾಲಿ ಎಸ್.ನಾಯ್ಕ್ ನೇತೃತ್ವದಲ್ಲಿ ನಡೆದ ಈ ಸಂಭ್ರಮಾಚರಣೆಯಲ್ಲಿ ಕಾರವಾರ ನಗರ ಮತ್ತು ಗ್ರಾಮೀಣ ಘಟಕದ ನೂರಾರು ಕಾರ್ಯಕರ್ತರು ಪಾಲ್ಗೊಂಡಿದ್ದರು.

ಪಶ್ಚಿಮ ಬಂಗಾಳ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಕೇಸರಿ ಪತಾಕೆ ಮುಗಿಲೆತ್ತರಕ್ಕೆ ಹಾರಾಡಿರುವುದು ಪಕ್ಷದ ಸಂಘಟನಾ ಶಕ್ತಿಗೆ ಸಂದ ಜಯ ಎಂದು ಕಾರ್ಯಕರ್ತರು ಹರ್ಷ ವ್ಯಕ್ತಪಡಿಸಿದರು. ಈ ವೇಳೆ ಪಟಾಕಿ ಸಿಡಿಸಿ, ಜಯಘೋಷ ಹಾಕುವ ಮೂಲಕ ಸವಿತಾ ಸರ್ಕಲ್ ಸುತ್ತಮುತ್ತ ಹಬ್ಬದ ವಾತಾವರಣ ನಿರ್ಮಾಣ ಮಾಡಲಾಗಿತ್ತು.



ಕಾರವಾರದ ಸವಿತಾ ಸರ್ಕಲ್‌ನಲ್ಲಿ ಜಮಾಯಿಸಿದ ಕಾರ್ಯಕರ್ತರು, ಪರಸ್ಪರ ಸಿಹಿ ಹಂಚುವ ಮೂಲಕ ಸಂಭ್ರಮ ಹಂಚಿಕೊಂಡರು.

ಪಶ್ಚಿಮ ಬಂಗಾಳ ಮತ್ತು ಅಸ್ಸಾಂನಲ್ಲಿನ ಈ ಐತಿಹಾಸಿಕ ಗೆಲುವು ಮುಂಬರುವ ದಿನಗಳಲ್ಲಿ ದೇಶಾದ್ಯಂತ ಬಿಜೆಪಿಯ ಅಲೆ ಮತ್ತಷ್ಟು ಜೋರಾಗಲಿದೆ ಎಂಬುದಕ್ಕೆ ಸಾಕ್ಷಿಯಾಗಿದೆ.

• **ರೂಪಾಲಿ ಎಸ್.ನಾಯ್ಕ್** ರಾಜ್ಯ ಬಿಜೆಪಿ ಉಪಾಧ್ಯಕ್ಷೆ

ಈ ಸಂದರ್ಭ ಮಾತನಾಡಿದ ರೂಪಾಲಿ ನಾಯ್ಕ್, ದೇಶದ ಜನತೆ ಮತ್ತೊಮ್ಮೆ ಪ್ರಧಾನಿ ನರೇಂದ್ರ ಮೋದಿ ಅವರ ಅಭಿವೃದ್ಧಿ ಮಂತ್ರ ಹಾಗೂ ದೂರದರ್ಶಿತ್ವದ ನಾಯಕತ್ವಕ್ಕೆ ಮನ್ನಣೆ ನೀಡಿದ್ದಾರೆ. ಪಶ್ಚಿಮ ಬಂಗಾಳ ಮತ್ತು ಅಸ್ಸಾಂನಲ್ಲಿನ ಈ ಐತಿಹಾಸಿಕ ಗೆಲುವು ಮುಂಬರುವ ದಿನಗಳಲ್ಲಿ ದೇಶಾದ್ಯಂತ ಬಿಜೆಪಿಯ ಅಲೆ ಮತ್ತಷ್ಟು ಜೋರಾಗಲಿದೆ ಎಂಬುದಕ್ಕೆ ಸಾಕ್ಷಿಯಾಗಿದೆ ಎಂದು ಬಣ್ಣಿಸಿದರು.

ಸಂಭ್ರಮಾಚರಣೆಯಲ್ಲಿ ಬಿಜೆಪಿ ನಗರ ಅಧ್ಯಕ್ಷ ನಾಗೇಶ್ ಕುರುಡೇಕರ್, ಗ್ರಾಮೀಣ ಅಧ್ಯಕ್ಷ ಸುಭಾಷ್ ಗುನಗಿ ಹಾಗೂ ನಗರಸಭೆ ಮಾಜಿ ಅಧ್ಯಕ್ಷ ರವಿರಾಜ್ ಅಂಕೋಲೆಕರ್ ಸಕ್ರಿಯವಾಗಿ ಪಾಲ್ಗೊಂಡಿದ್ದರು.

ಉಳಿದಂತೆ ಪ್ರಮುಖರಾದ ಮನೋಜ್ ಭಟ್, ನಯನಾ ನಿಲಾವರ್, ಮಹಿಳಾ ಮೋರ್ಚಾದ ಸುಜಾತ ಬಾಂದೇಕರ್, ಕಲ್ಪನಾ ನಾಯ್ಕ್, ವೈಶಾಲಿ ತಾಂಡೆಲ್, ದೇವಿದಾಸ್ ನಾಯ್ಕ್, ಉಲ್ಲಾಸ್ ಕೆಣಿ ಸೇರಿದಂತೆ ವಿವಿಧ ಮಂಡಲಗಳ ಪ್ರಧಾನ ಕಾರ್ಯದರ್ಶಿಗಳು, ಪದಾಧಿಕಾರಿಗಳು, ಜನಪ್ರತಿನಿಧಿಗಳು ಮತ್ತು ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದು, ವಿಜಯದ ಸಂಭ್ರಮವನ್ನು ವಿಜೃಂಭಣೆಯಿಂದ ಆಚರಿಸಿದರು.

ಆಧುನಿಕ ತಂತ್ರಜ್ಞಾನದ ಯುಗದಲ್ಲಿ ರಿಪೇರಿ ಮತ್ತು ಸರ್ವಿಸಿಂಗ್ ಕ್ಷೇತ್ರಕ್ಕೆ ವಿಪುಲವಾದ ಉದ್ಯೋಗವಕಾಶಗಳಿದ್ದು, ಇಂದು ಮಾರುಕಟ್ಟೆಯಲ್ಲಿ ಪರಿಣಿತರು ಹಾಗೂ ಕೌಶಲ್ಯವನ್ನು ಹೊಂದಿರುವ ಕುಶಲಕರ್ಮಿಗಳಿಗೆ ಮತ್ತು ತಂತ್ರಜ್ಞರಿಗೆ ಬಾರಿ ಬೇಡಿಕೆಯಿದೆ.

• **ರಾಜೇಂದ್ರ ಘೋಷಣಟ್ಟಿ** ಕೆಪಿಸಿಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್


ಸುದ್ದಿ ಸಿಂಚನ

ಪಿಯುಸಿ: ರಾಜ್ಯಕ್ಕೆ 3ನೇ ಸ್ಥಾನ ಪಡೆದ ಸಂಮಿತ್



ಗೋಕರ್ಣ: ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯ ವಿಜ್ಞಾನ ವಿಭಾಗದ ಮರು ಮೌಲ್ಯಮಾಪನದಲ್ಲಿ ಇಲ್ಲಿನ ಸಂಮಿತ್ ಅಮಿತ್ ಗೋಕರ್ಣ ರಾಜ್ಯಕ್ಕೆ ಮೂರನೇ ರ್‍ಯಾಂಕ್ ಪಡೆದುಕೊಂಡಿದ್ದಾನೆ. ಕಾರ್ಕಳದ ಕ್ರಿಯೇಟಿವ್ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಯಾಗಿದ್ದು, ಈ ಹಿಂದೆ ಫಲಿತಾಂಶ ಘೋಷಣೆಯಾದಾಗ ರಾಜ್ಯಕ್ಕೆ ಏಳನೇ ರ್‍ಯಾಂಕ್ ಪಡೆದುಕೊಂಡಿದ್ದು, ಉತ್ತರ ಪತ್ರಿಕೆ ಮರು ಮೌಲ್ಯಮಾಪನ ಮಾಡಿಸಿದ್ದು, 600ಕ್ಕೆ 599 ಪಡೆದು ಮೂರನೇ ಸ್ಥಾನ ಬಂದಿದೆ.

ಇಂದು ವಾಂಡರರ್ ಹೂ ಓನ್ಸ್ ದಿ ವರ್ಲ್ಡ್ ಪುಸ್ತಕ ಬಿಡುಗಡೆ



ಬೆಂಗಳೂರು: ಸಹಸ್ರಾರ ಶ್ರೀ ಯೋಗೀಶ್ವರ ಗುರುಪೀಠದ ಶ್ರೀಮದ್ ಪರಮಹಂಸ ಶ್ರೀ ಯೋಗೀಶ್ವರ ಅವಧೂತ ಸ್ವಾಮಿಗಳಿಂದ (ಶ್ರೀ ಯೋಗಿ) ವಿರಚಿತ ದಿ. ವಾಂಡರರ್ ಹೂ ಓನ್ಸ್ ದಿ ವರ್ಲ್ಡ್ ಪುಸ್ತಕ ಬಿಡುಗಡೆ ಹಾಗೂ ಸಂವಾದ, ಚರ್ಚಾ ಕಾರ್ಯಕ್ರಮ ಮೇ 7ರಂದು ಸಂಜೆ 5 ಗಂಟೆಯಿಂದ ಬೆಂಗಳೂರಿನ ಇಂದಿರಾ ನಗರದ ಆಟ್ಟಾ ಗಲಾಟ್ಟದಲ್ಲಿ ನಡೆಯಲಿದೆ. ಪುಸ್ತಕ ಬಿಡುಗಡೆ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಹೆಸರಾಂತ ಹೃದ್ರೋಗ ತಜ್ಞ ಮತ್ತು ಸಂಸದ ಡಾ. ಸಿ.ಎನ್. ಮಂಜುನಾಥ, ಸಂಸದ ಪಿ.ಸಿ. ಮೋಹನ, ಜಿ.ಅಶ್ವತ್ಥ ನಾರಾಯಣ, ಡಾ.ದೇವೇಂದ್ರ ಗುಪ್ತಾ ಕೆ.ಎಸ್. ಡಿವೈಎಸ್ಪಿ ಸುಧೀರ ಹೆಗಡೆ, ವೈದ್ಯ ಡಾ. ಪದ್ಮನಾಭನ್, ಖ್ಯಾತ ಚಲನಚಿತ್ರ ನಟಿ ತಾರಾ, ಸಾಹಿತಿ, ಕವಿ ಮಂಡಲಗಿರಿ ಪ್ರಸನ್ನ, ಚಿತ್ರ ನಟ ರಾಣಾ, ಸಂಕು ನರೇಂದ್ರನಾಥ ಅವರು ಆಗಮಿಸಲಿದ್ದಾರೆ. ಪುಸ್ತಕದ ಬಗ್ಗೆ ಡಾ. ಸಂಜಯ ನೀರಲಗಿ, ಪುಸ್ತಕದ ಒಳ ನೋಟಗಳು ಮತ್ತು ಅಂಶಗಳ ಬಗ್ಗೆ ಡಾ. ಸವಿತಾ ಎಸ್. ನೀರಲಗಿ ಮಾತನಾಡಲಿದ್ದಾರೆ. ಶ್ರೀ ಯೋಗೀಶ್ವರ ಅವಧೂತರು ತಮ್ಮ ಅನಿಸಿಕೆಯನ್ನು ಸಾದರಪಡಿಸಲಿದ್ದಾರೆ.

ನಾಳೆ ಯಕ್ಷಗಾನ ಪ್ರದರ್ಶನ

ಶಿರಸಿ: ಬಡಕುಟುಂಬಕ್ಕೆ ಸಹಾಯ ಮಾಡುವ ದೃಷ್ಟಿಯಿಂದ ಅದರ ಸಹಾಯಾರ್ಥವಾಗಿ ಮೇ 8 ರಂದು ರಾತ್ರಿ 8.30ಕ್ಕೆ ಶಿರಸಿಯ ಯಲ್ಲಾಪುರ ರಸ್ತೆಯಲ್ಲಿರುವ ಪೊಲೀಸ್ ವಿಧಾನದಲ್ಲಿ ಕೃಷ್ಣ ಕುಚೇಲ ಮಾಯಾ ಮೃಗಾವತಿ ಎಂಬ ಯಕ್ಷಗಾನ ಪ್ರದರ್ಶನ ಆಯೋಜಿಸಲಾಗಿದೆ ಎಂದು ಸಂಘಟಕ ಲೋಕೇಶ್ ಹೆಗಡೆ ತಿಳಿಸಿದರು. ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂಕೋಲಾ ತಾಲೂಕಿನ ಹೆಬ್ಬಾರ್‌ಗುಡ್ಡೆ ಕುಗ್ರಾಮದ ಕೃಷ್ಣ ತಿಮ್ಮಣ್ಣ ಗಾಂವ್ಕರ್ ಅನಾರೋಗ್ಯದಿಂದ ಬಳಲುತ್ತಿದ್ದು, ಅವರಿಗೆ ಆರ್ಥಿಕ ಆರ್ಥಿಕ ನೆರವು ನೀಡುವ ಹಿನ್ನೆಲೆ ಮತ್ತು ಮಧ್ಯದಲ್ಲಿ ಶಂಕರ ಭಾಗವತರಿಗೆ ಸನ್ಮಾನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ತಿಳಿಸಿದರು. ಆದ್ದರಿಂದ ಸಾಕಷ್ಟು ಪ್ರಮಾಣದಲ್ಲಿ ಸಾರ್ವಜನಿಕರು ಆಗಮಿಸಿ ಈ ಒಂದು ಯಕ್ಷಗಾನ ಪ್ರದರ್ಶನವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು. ಈ ಸಂದರ್ಭ ಲೋಕೇಶ್ ಹೆಗಡೆ, ಮಹೇಶ್ ಭಟ್ ಸೇರಿದಂತೆ ಅನೇಕರು ಇದ್ದರು.


ಬಿಟ್ಟು ಹೋದ ಮೊಬೈಲ್‌ನ ವಾರಸುದಾರರ ಪತ್ತೆ, ವಾಪಸ್



ಗೋಕರ್ಣ: ದೇವಾಲಯದಲ್ಲಿ ಭಕ್ತರು ಬಿಟ್ಟು ಹೋದ ಮೊಬೈಲ್‌ನ ವಾರಸುದಾರರ ಪತ್ತೆ ಹಚ್ಚಿ ಮರಳಿಸಿದ ಘಟನೆ ಬುಧವಾರ ಸಂಜೆ ಇಲ್ಲಿನ ಮಹಾಬಲೇಶ್ವರ ಮಂದಿರದ ಪೊಲೀಸ್ ಹೊರಠಾಣೆಯಲ್ಲಿ ನಡೆದಿದೆ. ತಾಮ್ರಗೌರಿ ಮಂದಿರದಲ್ಲಿ ಸ್ಥಳೀಯ ಭಕ್ತರಿಗೆ ಮೊಬೈಲ್ ಸಿಕ್ಕಿದ್ದು, ಇದನ್ನ ಪೊಲೀಸ್ ಹೊರ ಠಾಣೆಗೆ ತಲುಪಿಸಿದ್ದಾರೆ. ಹವಾಲ್ದಾರ ಜಟ್ಟಪ್ಪ ನಾಯ್ಕ ವಾರಸುದಾರರ ಪತ್ತೆ ಹಚ್ಚಿ ಮರಳಿ ನೀಡಿದ್ದಾರೆ. ತಮಿಳುನಾಡಿನ ಮಧುರೆಯ ಮುತ್ತುಮಾರಿ ಎಂಬವರ ಮೊಬೈಲ್ ಆಗಿದ್ದು, ವಾಪಸ್ ನೀಡಿದ ಪೊಲೀಸ್ ಹಾಗೂ ಸ್ಥಳೀಯ ಭಕ್ತರಿಗೆ ಕೃತಜ್ಞತೆ ಸಲ್ಲಿಸಿ ತೆರಳಿದ್ದಾರೆ.

ಸಾಹಿತ್ಯ ಸಮಾಜ ಸುಧಾರಣೆಗೆ ದಾರಿ ತೋರಿಸುವ ಬೆಳಕು

ಜಾಲಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ | ಪ್ರಾಂಶುಪಾಲ ನಾಗೇಶ ಶೆಟ್ಟಿ



ಭಟ್ಕಳದ ಜಾಲಿಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನ ಆಚರಿಸಲಾಯಿತು.

• **ಕನ್ನಡಪ್ರಭ ವಾರ್ತೆ** ಭಟ್ಕಳ

ಜಾಲಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆಯನ್ನು ಪ್ರಾಂಶುಪಾಲ ನಾಗೇಶ ಶೆಟ್ಟಿ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಸಾಹಿತ್ಯ ಅಕ್ಷರಗಳ ಜೋಡಣೆಯಲ್ಲ. ಸಮಾಜ ಸುಧಾರಣೆಗೆ ದಾರಿ ತೋರಿಸುವ ಬೆಳಕಾಗಿದೆ. ಒಂದು ಕಾಲಕ್ಕೆ ಪುಸ್ತಕ ರೂಪದಲ್ಲಿಯೇ ವಿಚಾರಗಳನ್ನು ಅಭಿವ್ಯಕ್ತಿ ಪಡಿಸಬೇಕಾಗಿತ್ತು. ಆದರೆ ಇಂದು ಕಾಲ ಬದಲಾಗಿದೆ. ಸಾಮಾಜಿಕ ಜಾಲತಾಣಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ವೈಚಾರಿಕ ಚಿಂತನೆ, ಸೃಜನಶೀಲ ಬರೆವಣಿಗೆಗಳನ್ನು ದಾಟಿಸಬಹುದು. ಕನ್ನಡ ಸಾಹಿತ್ಯ ಪರಿಷತ್ತು ಕನ್ನಡಿಗರ ಹೆಮ್ಮೆಯ ಪ್ರಾತಿನಿಧಿಕ ಸಂಸ್ಥೆಯಾಗಿದ್ದು, ಏಕೀಕರಣ ಸಂದರ್ಭದಲ್ಲಿ ಮುಖ್ಯ ಪಾತ್ರ ವಹಿಸಿದ್ದ ಸಾಹಿತ್ಯ ಪರಿಷತ್ತನ್ನು ಹಾಗೆಯೇ ಅದರ ಸಂಸ್ಥಾಪಕರನ್ನು ಸದಾ ಸ್ಮರಿಸಬೇಕಾದುದು ನಮ್ಮೆಲ್ಲರ ಕರ್ತವ್ಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ಗಂಗಾಧರ ನಾಯ್ಕ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತು ಕನ್ನಡಿಗರ ಹೆಮ್ಮೆಯ ಪ್ರಾತಿನಿಧಿಕ ಸಂಸ್ಥೆ. ಕನ್ನಡ ಸಾಹಿತ್ಯ, ಲೇಖಕರನ್ನು ಉತ್ತೇಜಿಸುವುದು, ಸಾಹಿತ್ಯ ಸಮ್ಮೇಳನಗಳನ್ನು ಸಂಘಟಿಸುವ ಮೂಲಕ ನಮ್ಮ ನಾಡು, ನುಡಿ, ಸಂಸ್ಕೃತಿಯನ್ನು ಉಳಿಸಿ-ಬೆಳೆಸುವ ಕಾರ್ಯವನ್ನು ಪರಿಷತ್ತು ಮಾಡುತ್ತಿದೆ. ಎಲ್ಲ ವಿದ್ಯಾರ್ಥಿಗಳು ಪರಿಷತ್ತಿನ ಆಜೀವ ಸದಸ್ಯತ್ವ ಪಡೆದುಕೊಳ್ಳಬೇಕೆಂದು ಕರೆ ನೀಡಿದರಲ್ಲದೇ, ನಮ್ಮ ನಾಡು ನುಡಿಗೆ ನಮ್ಮ ನೆಲೆಯಲ್ಲಿ ಕೊಡುಗೆ ನೀಡುವಂತಾಗಬೇಕು ಎಂದು ನುಡಿದರು.

ಕಸಾಪ ಗೌರವ ಕೋಶಧ್ಯಕ್ಷ, ಸಾಹಿತಿ ಶ್ರೀಧರ್‌ಶೇಟ್ ಸಾಹಿತ್ಯ ಪರಿಷತ್ತಿನ ಸ್ಥಾಪನೆಯ ಹಿನ್ನೆಲೆ, ಸಾಧನೆಯ ಕುರಿತು ಉಪನ್ಯಾಸ ನೀಡಿದರು. ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಕಸಾಪ ಆಜೀವ ಸದಸ್ಯ, ವಿಜಯ ಬ್ಯಾಂಕ್ ನಿವೃತ್ತ ಮುಖ್ಯ ವ್ಯವಸ್ಥಾಪಕ ಎಂ.ಆರ್. ನಾಯ್ಕ, ಸಾಹಿತಿ ಮಾನಾಸುತ ಶಂಭು ಹೆಗಡೆ ಮಾತನಾಡಿದರು. ಕಾರ್ಯಕ್ರಮದ ಆರಂಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪಕರಾದ ನಾಲ್ವಡಿ ಕೃಷ್ಣರಾಜ ಒಡೆಯರ್, ಸರ್‌ಎಂ.ವಿಶ್ವೇಶ್ವರಯ್ಯ, ಮಿರ್ಜಾ ಇಸ್ಮಾಯಿಲ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು. ಕಾರ್ಯಕ್ರಮ ದಲ್ಲಿ ಕಾಲೇಜಿನ ಪ್ರಾಂಶುಪಾಲ ನಾಗೇಶ್ ಶೆಟ್ಟಿ ಅವರನ್ನು ಸಾಹಿತ್ಯ ಪರಿಷತ್ ವತಿಯಿಂದ ಸನ್ಮಾನಿಸಲಾಯಿತು. ಕಾಲೇಜಿನ ವಿದ್ಯಾರ್ಥಿಗಳು ನಾಡಗೀತೆ ಹಾಡಿದರು. ಕಸಾಪ ಗೌರವ ಕಾರ್ಯದರ್ಶಿ ನಾರಾಯಣ ಕಾರ್ಯಕ್ರಮ ನಿರೂಪಿಸಿದರು.

ನುಡಿ, ಜಲ, ನೆಲ, ಸಂಸ್ಕೃತಿ ಕಾಪಾಡುವುದು ಕಸಾಪ ಕೆಲಸ

• **ಕನ್ನಡಪ್ರಭ ವಾರ್ತೆ** ಮುಂಡಗೋಡ

ಕನ್ನಡ ನಾಡಿನ ನುಡಿ, ಜಲ, ನೆಲ, ಸಂಸ್ಕೃತಿ ಇವುಗಳನ್ನು ಕಾಪಾಡಿಕೊಂಡು ಹೋಗುವುದೇ ಕನ್ನಡ ಸಾಹಿತ್ಯ ಪರಿಷತ್ ಮುಖ್ಯ ಕಾರ್ಯವಾಗಿದೆ ಎಂದು ಉದ್ಯಮಿ ಸುರೇಶ ಕಲ್ಲೊಳ್ಳಿ ಹೇಳಿದರು. ಪಟ್ಟಣದ ನಿವೃತ್ತ ನೌಕರರ ಭವನದಲ್ಲಿ ಕನ್ನಡ ಸಾಹಿತ್ಯ ಮುಂಡಗೋಡ ಪರಿಷತ್ತು ತಾಲೂಕು ಘಟಕದ ಆಶ್ರಯದಲ್ಲಿ ನಡೆದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಸಂದರ್ಭದಲ್ಲಿ ಉಪನ್ಯಾಸಕರಾಗಿ ಮಾತನಾಡಿದರು. ಇದುವರೆಗೆ 88 ಅಖಿಲ ಭಾರತ ಸಾಹಿತ್ಯ ಸಮ್ಮೇಳನಗಳು ಕರ್ನಾಟಕ, ಮಹಾರಾಷ್ಟ್ರ, ಆಂಧ್ರಪ್ರದೇಶ ಮತ್ತು ದೆಹಲಿ ಹೀಗೆ ನಾನಾ ಕಡೆ ನಡೆಸಿದ್ದು, ಅವುಗಳಲ್ಲಿ 4 ಅಖಿಲ ಭಾರತ ಸಾಹಿತ್ಯ ಸಮ್ಮೇಳನಕ್ಕೆ ಮಹಿಳಾ ಸಾಹಿತಿಗಳನ್ನು ಸರ್ವಾಧ್ಯಕ್ಷನಾಗಿ ಮಾಡಿ ಮಹಿಳೆಯರಿಗೂ ಪ್ರಾತಿನಿಧ್ಯ ನೀಡಿದ್ದು ಅಭಿನಂದನೀಯ ಎಂದರು.



ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಉದ್ಘಾಟಿಸಲಾಯಿತು.

ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸುಭಾಸ ಡೋರಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮುಂಡಗೋಡ ಕನ್ನಡ ಸಾಹಿತ್ಯ ಪರಿಷತ್‌ನವರು ಅನೇಕ ಕನ್ನಡ ಪರ ಕಾರ್ಯಕ್ರಮಗಳನ್ನು ಮಾಡಿ ಜನರಲ್ಲಿ ಕನ್ನಡದ ಬಗ್ಗೆ ಜಾಗೃತಿ ಮೂಡಿಸಿದ್ದಾರೆ. ಇತ್ತೀಚೆಗೆ ಎಂಟನೇ ಕನ್ನಡ ಸಾಹಿತ್ಯ ಸಮ್ಮೇಳನ ಅದ್ದೂರಿಯಾಗಿ ನಡೆದಿದ್ದೇ ಇದಕ್ಕೆ ಸಾಕ್ಷಿಯಾಗಿದೆ ಎಂದರು. ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಸ್.ಕೆ. ಬೋರ್ಕರ್ ಹಾಗೂ ಸಿಎಂ ಕೋಚಿಂಗ್ ತರಬೇತಿಯ ಸಂಚಾಲಕ ಪ್ರವೀಣ್ ತಟ್ಟಿ ಮಾತನಾಡಿದರು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಸಂತ ಕೊಣಸಾಲಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಈಗಿನ ವಿದ್ಯಾರ್ಥಿಗಳು ಇಂಗ್ಲಿಷ್, ಫ್ರೆಂಚ್, ಜರ್ಮನಿ ಯಾವುದೇ ಭಾಷೆಯನ್ನು ಕಲಿತರೂ ಪರವಾಗಿಲ್ಲ, ಆದರೆ ತಾಯಿ ಭಾಷೆಯಾದ ಕನ್ನಡವನ್ನು ಮರೆಯದೆ ಎಲ್ಲ ಕಡೆ ಬಳಸಿದರೆ ಕನ್ನಡ ಭಾಷೆ ಉಳಿಯುತ್ತದೆ. ಪ್ರತಿ ಮನೆಯಲ್ಲಿ ಇಂಗ್ಲಿಷ್ ಮಾಧ್ಯಮದಲ್ಲಿ ಓದುತ್ತಿರುವ ಚಿಕ್ಕ ಮಕ್ಕಳಿಗೆ ಕನ್ನಡದಲ್ಲಿಯೇ ಪ್ರಾಣಿ-ಪಕ್ಷಿ ಕೃಷಿಯ ಕುರಿತು ಮಾತನಾಡುವುದನ್ನು ಪಾಲಕರು ಕಲಿಸುವುದು ಬಹಳ ಅವಶ್ಯಕತೆ ಇದೆ. ಇಲ್ಲದೆ ಹೋದರೆ ಮುಂದೊಂದು ದಿನ ಮಕ್ಕಳು ಕನ್ನಡ ಭಾಷೆಯನ್ನು ಮರೆಯುವ ಸಂಭವವಿದೆ ಎಂದು ಹೇಳಿದರು.

ಆನಂದ ಹೊಸೂರ್, ಸಿ.ಎನ್. ಸುರಕೋಡ, ಮಂಜುನಾಥ ಕಂಬಿ, ಎಸ್.ಬಿ. ಹೂಗಾರ, ಸಂಗಪ್ಪ ಕೋಳೂರ ಮುಂತಾದವರಿದ್ದರು. ನಾಗರಾಜ್ ಅರ್ಕಸಾಲಿ ಸ್ವಾಗತಿಸಿದರು. ವಿನಾಯಕ್ ಶೇಟ ಕಾರ್ಯಕ್ರಮ ನಿರೂಪಿಸಿದರು. ಸುಭಾಸ ವಡ್ಡರ್‌ವಂದಿಸಿದರು.



ಮುರುಡೇಶ್ವರದಲ್ಲಿ ಬೆಳಕೆ ಗ್ರಾಮೀಣ ವ್ಯವಸಾಯ ಸಹಕಾರಿ ಸಂಘದ 4ನೇ ಶಾಖೆಯನ್ನು ಉದ್ಘಾಟಿಸಲಾಯಿತು.

ನೂತನ ಶಾಖೆಯ ಅಭಿವೃದ್ಧಿಗೆ ಸಹಕಾರ ನೀಡಿ: ಮಾದೇವ

• **ಕನ್ನಡಪ್ರಭ ವಾರ್ತೆ** ಭಟ್ಕಳ

ಮುರುಡೇಶ್ವರದ ಬಸ್ ನಿಲ್ದಾಣದ ಎದುರಿನ ಕಟ್ಟಡದಲ್ಲಿ ಬೆಳಕೆ ಗ್ರಾಮೀಣ ವ್ಯವಸಾಯ ಸಹಕಾರಿ ಸಂಘದ 4ನೇ ಶಾಖೆಯನ್ನು ಸಂಘದ ಅಧ್ಯಕ್ಷ ಮಾದೇವ ಜಿ. ನಾಯ್ಕ ಉದ್ಘಾಟಿಸಿದರು.

ಈ ಸಂದರ್ಭ ಮಾತನಾಡಿದ ಅವರು, ನಮ್ಮ ಸಹಕಾರಿ ಸಂಘ ಈಗಾಗಲೇ ಬೆಳಕೆಯ ಪ್ರಧಾನ ಕಚೇರಿಯಲ್ಲಿ ಮುಖ್ಯ ಶಾಖೆ, ಶಿರೂರು ಮತ್ತು ಸರ್ಪನಕಟ್ಟೆಯಲ್ಲಿ ಶಾಖೆ ಹೊಂದಿದೆ. ಇದೀಗ ನಾವು ಮುರುಡೇಶ್ವರದಲ್ಲಿ ಜನರಿಗೆ ಅನುಕೂಲವಾಗಲು ನಮ್ಮ ಸಂಘದ 4ನೇ ಶಾಖೆಯನ್ನು ವಿಸ್ತರಿಸುತ್ತಿದ್ದೇವೆ. ನಮ್ಮ ಸಂಘ ಎಲ್ಲರ ಸಹಕಾರದಿಂದ ವರ್ಷದಿಂದ ವರ್ಷಕ್ಕೆ ಅಭಿವೃದ್ಧಿ ಪಥದಲ್ಲಿ ಸಾಗುತ್ತಿದೆ. ಹೊಸದಾಗಿ ಮುರುಡೇಶ್ವರದಲ್ಲಿ ಶಾಖೆ ಮಾಡಬೇಕೆಂಬ ಬಗ್ಗೆ ನಿರ್ಧಾರ ಮಾಡಲಾಗಿತ್ತು. ಶಾಖೆ ಸುಸಜ್ಜಿತವಾಗಿದ್ದು, ಇಲ್ಲಿ ನಮ್ಮ ಸಂಘದ ವ್ಯವಹಾರ ಉತ್ತಮವಾಗಿ ನಡೆಯಬಹುದೆಂಬ ವಿಶ್ವಾಸ ವ್ಯಕ್ತಪಡಿಸಿದ ಅವರು, ಮುರುಡೇಶ್ವರ ಭಾಗದ ಜನರು ಶಾಖೆಯಲ್ಲಿ ವ್ಯವಹಾರ ಮಾಡಿ ಸಂಘದ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದರು.

ಉದ್ಘಾಟನೆಯ ಪೂರ್ವದಲ್ಲಿ ಶಾಖೆಯಲ್ಲಿ ಗಣ ಹೋಮ ಮತ್ತು ಲಕ್ಷ್ಮೀ ಪೂಜೆ ನಡೆಸಲಾಯಿತು. ಈ ಸಂದರ್ಭ ಉಪಾಧ್ಯಕ್ಷ ಪಾಂಡು ಜಿ ನಾಯ್ಕ, ನಿರ್ದೇಶಕರಾದ ಲಕ್ಷ್ಮೀನಾರಾಯಣ ನಾಯ್ಕ, ನಾಗೇಶ ನಾಯ್ಕ, ಲೋಕೇಶ ಎಂ. ನಾಯ್ಕ, ದಾಮೋದರ ನಾಯ್ಕ,

■ **ಮುರುಡೇಶ್ವರದಲ್ಲಿ ಬೆಳಕೆ ಗ್ರಾಮೀಣ ವ್ಯವಸಾಯ ಸಂಘದ 4ನೇ ಶಾಖೆ ಉದ್ಘಾಟನೆ**

ರವಿರಾಜ ಜೈನ್, ಮಂಜು ಮೊಗೇರ, ಭಾಸ್ಕರ ಗೊಂಡ, ಲಲಿತಾ ಕೊರ್ಗ ನಾಯ್ಕ, ಶಾರದಾ ಚಂದ್ರ ನಾಯ್ಕ, ಭಾರತಿ ರವಿ ನಾಯ್ಕ, ಪ್ರಧಾನ ವ್ಯವಸ್ಥಾಪಕ ಅಣ್ಣಪ್ಪ ಎನ್. ನಾಯ್ಕ, ಕೆಡಿಸಿಸಿ ಬ್ಯಾಂಕ್ ಮೇಲ್ವಿಚಾರಕ ಗಣೇಶ ಗೌಡ, ಭಟ್ಕಳ ಪಿಎಲ್‌ಡಿ ಬ್ಯಾಂಕ್ ನಿವೃತ್ತ ಪ್ರಧಾನ ವ್ಯವಸ್ಥಾಪಕ ವಾಸುದೇವ ನಾಯ್ಕ, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಸಂತೋಷ ನಾಯ್ಕ ಸೇರಿ ಮುರುಡೇಶ್ವರದ ಭಾಗದ ಮುಖಂಡರು, ಗ್ರಾಹಕರಿದ್ದರು.

ಭಟ್ಕಳ ನೆಸ್ತಾರ ಸಮುದ್ರದಲ್ಲಿ ಅಲೆಗಳ ಅಬ್ಬರಕ್ಕೆ ಇಬ್ಬರ ಬಲಿ

• **ಕನ್ನಡಪ್ರಭ ವಾರ್ತೆ** ಭಟ್ಕಳ

ತಾಲ್ಲೂಕಿನ ಮುಂಡಳ್ಳಿಯ ನೆಸ್ತಾರ್ ಸಮುದ್ರದ ತೀರಕ್ಕೆ ವಿಹಾರಕ್ಕೆ ಹೋದ ಇಬ್ಬರು ಅಲೆಗಳ ಅಬ್ಬರಕ್ಕೆ ಕೊಚ್ಚಿ ಹೋಗಿ ಸಾವನ್ನಪ್ಪಿದ ಘಟನೆ ಬುಧವಾರ ಸಂಜೆ ನಡೆದಿದೆ.

ಮೃತರನ್ನು ಕಾನ್ಪುರ ನಿವಾಸಿಗಳಾದ ಅಫ್ರೋಜ್ (34) ಮತ್ತು ರಿಜ್ವಾನ್ (28) ಎಂದು ಗುರುತಿಸಲಾಗಿದೆ. ಇವರು ಭಟ್ಕಳ ಪಟ್ಟಣದ ಜವಳಿ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದರು. ಇವರು ಬುಧವಾರ ಸಂಜೆ 4 ಗಂಟೆಯ ಸುಮಾರಿಗೆ ಕುಟುಂಬದವರು ಮತ್ತು ಸ್ನೇಹಿತರೊಂದಿಗೆ ವಿಹಾರಕ್ಕಾಗಿ ನೆಸ್ತಾರ ಬೀಚಿಗೆ ಹೋಗಿದ್ದರು. ಅವರಲ್ಲಿ ಮೂವರು ತೀರದಲ್ಲಿ ಕುಳಿತಿದ್ದಾಗ, ಉಳಿದ ನಾಲ್ವರು ಅಲೆಗಳನ್ನು ವೀಕ್ಷಿಸಲು ಪಕ್ಕದ ಕಲ್ಲಿನ ಬೆಟ್ಟವನ್ನು ಹತ್ತಿದ್ದರು. ಈ ಸಂದರ್ಭ ಬಂದ ಭಾರೀ ಅಲೆಯೊಂದು ಮೇಲಕ್ಕೆ ಏರಿದ್ದರಿಂದ ಇಬ್ಬರನ್ನೂ ಎಳೆದುಕೊಂಡು ಹೋಗಿದೆ. ಘಟನೆ ತಿಳಿದ



ಸ್ಥಳೀಯರು ತಕ್ಷಣ ಸಮುದ್ರಕ್ಕೆ ಇಳಿದಿದ್ದರೂ ಸಹ ಪ್ರಯೋಜನಕಾರಿ ಆಗದೇ ಇಬ್ಬರೂ ಮೃತಪಟ್ಟಿದ್ದರು.

ಡಿವೈಎಸ್ಪಿ ಗಿರೀಶ, ಗ್ರಾಮೀಣ ಪೊಲೀಸ್ ಇನ್‌ಸ್ಪೆಕ್ಟರ್ ವೆಂಕಟೇಶ್ ಮತ್ತು ಕರಾವಳಿ ಭದ್ರತಾ ಪೊಲೀಸರ ಸಿಬ್ಬಂದಿ ಸೇರಿ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಅಗತ್ಯ ಕ್ರಮ ಕೈಗೊಂಡರು. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಭಟ್ಕಳ ಸರ್ಕಾರಿ ಆಸ್ಪತ್ರೆಯ ಶವಾಗಾರಕ್ಕೆ ಸ್ಥಳಾಂತರಿಸಲಾಗಿದೆ. ಈ ಕುರಿತು ಗ್ರಾಮೀಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಗಾಂಜಾ ಮಾರಾಟ ಮಾಡುತ್ತಿದ್ದ ವ್ಯಕ್ತಿಯ ಬಂಧನ

ದಾಂಡೇಲಿ: ನಗರದ ಟಿ.ಆರ್.ಟಿ ಕ್ರಾಸ್ ವಾಟರ್‌ಟ್ಯಾಂಕ್ ಹತ್ತಿರದ ಸಾರ್ವಜನಿಕ ಸ್ಥಳದಲ್ಲಿ ಮಂಗಳವಾರ ರಾತ್ರಿ 11 ಗಂಟೆಯ ಸಮಯಕ್ಕೆ ಗಾಂಜಾ ಮಾರಾಟ ಮಾಡುತ್ತಿದ್ದ ವ್ಯಕ್ತಿಯನ್ನು ಮಾಲು ಸಹಿತ ಬಂಧಿಸಿ, ನ್ಯಾಯಾಲಯಕ್ಕೆ ಹಾಜರು ಪಡಿಸಲಾಗಿದೆ.

ಗಾಂಧಿನಗರದ ನಿವಾಸಿ ಅಲಿಸಾಬ ರಾಜೇಸಾಬ ಸಿದ್ದಿನಾಯ್ಕ (75) ಗಾಂಜಾ ಮಾರಾಟ ಮಾಡುತ್ತಿದ್ದಾಗ ಪೊಲೀಸರ ಕೈಗೆ ಸಿಕ್ಕಿ ಬಿದ್ದಿದ್ದಾನೆ. ನಗರ ಠಾಣೆಯ ಕಿರಣ್ ಪಾಟೀಲ್ ಪೊಲೀಸರ ಜತೆ ದಾಳಿ ನಡೆಸಿ ವಶಕ್ಕೆ ಪಡೆದಿದ್ದಾರೆ. ಆರೋಪಿಯಿಂದ ₹15000 ಸಾವಿರ ಮೌಲ್ಯದ 270ಗ್ರಾಂ ತೂಕದ ಹಸಿ ಮತ್ತು ಒಣಗಿದ ಗಾಂಜಾವನ್ನು ಚೀಲ ಸಮೇತ ವಶಪಡಿಸಿಕೊಂಡಿದ್ದಾರೆ. ಪಿಎಸ್‌ಐ ಅಮೀನ್ ಅತ್ತಾರ ಮುಂದಿನ ತನಿಖೆ ಕೈಗೊಂಡಿದ್ದಾರೆ.

ಸಮಾರೋಪ... | **ಕೆಪಿಸಿಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ರಾಜೇಂದ್ರ ಘೋಷಣೆ**

ಕೌಶಲ್ಯ ಹೊಂದಿರುವವರಿಗೆ ಬೇಡಿಕೆಯಿದೆ

• **ಕನ್ನಡಪ್ರಭ ವಾರ್ತೆ** ಹಳಿಯಾಳ

ಶಿಬಿರಾರ್ಥಿಗಳು ತಮ್ಮ ಸ್ವಯಂ ಉದ್ಯೋಗ ಆರಂಭಿಸುವಾಗ ಪ್ರಚಲಿತ ಮಾರುಕಟ್ಟೆಯ ಬೇಡಿಕೆ, ಗ್ರಾಹಕರ ಮನಸ್ಥಿತಿಯನ್ನು ತಿಳಿದು ಹೆಜ್ಜೆಯಿಡಬೇಕು. ಗ್ರಾಹಕರೊಂದಿಗೆ ನೀವು ಮಾಡಿದ ಮೊದಲ ಸಂಪರ್ಕ ಹಾಗೂ ನಿಮ್ಮ ಮೊದಲ ವಹಿವಾಟು ಅವರ ಮನದಲ್ಲಿ ಅಚ್ಚಳಿಯದೇ ಉಳಿಯಲಿದೆ ಎಂದು ಗಣೇಶಗುಡಿ ಕೆಪಿಸಿಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ರಾಜೇಂದ್ರ ಘೋಷಣಟ್ಟಿ ಹೇಳಿದರು.

ಪಟ್ಟಣದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟಿ ಸಂಸ್ಥೆಯಲ್ಲಿ ಬುಧವಾರ ಆಯೋಜಿಸಿದ ಎಲೆಕ್ಟ್ರಿಕ್ ಮೋಟಾರ್‌ರಿವೈಂಡಿಂಗ್, ರಿಪೇರಿ ಮತ್ತು ಸರ್ವಿಸಿಂಗ್ ತರಬೇತಿ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ತರಬೇತಿ ಪಡೆದ ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಿ ಅವರು ಮಾತನಾಡಿದರು.

ಆಧುನಿಕ ತಂತ್ರಜ್ಞಾನದ ಯುಗದಲ್ಲಿ ರಿಪೇರಿ ಮತ್ತು ಸರ್ವಿಸಿಂಗ್ ಕ್ಷೇತ್ರಕ್ಕೆ ವಿಪುಲವಾದ ಉದ್ಯೋಗವಕಾಶಗಳಿದ್ದು, ಇಂದು ಮಾರುಕಟ್ಟೆಯಲ್ಲಿ ಪರಿಣಿತರು ಹಾಗೂ ಕೌಶಲ್ಯವನ್ನು ಹೊಂದಿರುವ ಕುಶಲಕರ್ಮಿಗಳಿಗೆ ಮತ್ತು ತಂತ್ರಜ್ಞರಿಗೆ ಬಾರಿ



ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್‌ರಾಜೇಂದ್ರ ಘೋಷಣಟ್ಟಿ ಮಾತನಾಡಿದರು.

ಬೇಡಿಕೆಯಿದೆ ಎಂದರು.

ಇದು ಪೈಪೋಟಿ ಹಾಗೂ ಗುಣಮಟ್ಟದ ಕಾಲ. ಹೀಗಿರುವಾಗ ಉತ್ತಮ ಗುಣಮಟ್ಟದ ಸೇವೆ ನೀಡುವವರಿಗೆ ಗ್ರಾಹಕರು ಪ್ರಥಮ ಆದ್ಯತೆ ನೀಡುತ್ತಾರೆ. ನಿಮ್ಮ ಸೇವೆ ಮಾರುಕಟ್ಟೆಯಲ್ಲಿ ಭಿನ್ನವಾಗಿದೆ, ಗುಣಮಟ್ಟದಾಗಿದೆ ಹಾಗೂ ಗ್ರಾಹಕರು ಬಯಸಿದ ನಿಗದಿತ ಕಾಲಮಿತಿಯಲ್ಲಿಯೇ ಸೇವೆ ಒದಗಿಸಲಾಗುತ್ತದೆ ಎಂಬ ಚಿತ್ರಣ ಒಮ್ಮೆ ಗ್ರಾಹಕರ ಮನದಲ್ಲಿ ಅಥವಾ ಮಾರುಕಟ್ಟೆಯಲ್ಲಿ ಬಿಂಬಿಸಿದರೇ ಸಾಕು ಗ್ರಾಹಕರು ಮತ್ತು ಮಾರುಕಟ್ಟೆ ವ್ಯವಸ್ಥೆಯು ನಿಮ್ಮನ್ನು ಅರಸಿಕೊಂಡು ಬರುತ್ತದೆ ಎಂದರು.

ಸಮಾರಂಭದಲ್ಲಿ ಸಂಸ್ಥೆಯಲ್ಲಿ ತರಬೇತಿ ಪಡೆದು ಯಶಸ್ವಿ ಉದ್ಯಮಿಯಾಗಿರುವ ಆಕಾಶ್ ಪೋಕಲೆ ಅವರು ತಮ್ಮ ಅನುಭವ ಹಂಚಿಕೊಂಡರು.

ಸಮಾರಂಭದ ಅಧ್ಯಕ್ಷತೆ ವಹಿಸಿದ ಸಂಸ್ಥೆಯ ಯೋಜನಾ ಸಂಯೋಜಕ ವಿನಾಯಕ ಚವ್ಹಾಣ ಮಾತನಾಡಿದರು. ತರಬೇತಿಯನ್ನು ಯಶಸ್ವಿಯಾಗಿ ಮುಕ್ತಾಯಗೊಳಿಸಿದ 25 ಶಿಬಿರಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಲಾಯಿತು. ಸಂಸ್ಥೆಯ ಕೊಂಡು ಕೋಕರೆ ಕಾರ್ಯಕ್ರಮ ನಿರ್ವಹಿಸಿದರು.

ವಾಲಿಬಾಲ್‌ನಲ್ಲಿ ಹಳಿಯಾಳದ ಎಂಜಿನಿಯರಿಂಗ್ ಕಾಲೇಜು ಪ್ರಥಮ



ವಾಲಿಬಾಲ್ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನವನ್ನು ಪಡೆದ ಪಟ್ಟಣದ ಕೆ.ಎಲ್.ಎಸ್ ಸಂಸ್ಥೆಯ ವಿ.ಡಿ.ಐ.ಟಿ ಇಂಜಿನಿಯರಿಂಗ್ ಮಹಾವಿದ್ಯಾಲಯದ ವಿದ್ಯಾರ್ಥಿಗಳ ತಂಡ.

• **ಕನ್ನಡಪ್ರಭ ವಾರ್ತೆ** ಹಳಿಯಾಳ

ಬೆಳಗಾವಿ ವಿಟಿಯು ವಿಭಾಗ ಮಟ್ಟದ ಪುರುಷರ ವಾಲಿಬಾಲ್ ಪಂದ್ಯಾವಳಿಯಲ್ಲಿ ಪಟ್ಟಣದ ಕೆ.ಎಲ್.ಎಸ್ ಸಂಸ್ಥೆಯ ವಿಡಿಐಟಿ ಎಂಜಿನಿಯರಿಂಗ್ ಮಹಾವಿದ್ಯಾಲಯದ ವಿದ್ಯಾರ್ಥಿಗಳ ತಂಡವು ಪ್ರಥಮ ಸ್ಥಾನ ಪಡೆದಿದೆ.

ಮೇ 4 ಮತ್ತು 5ರಂದು ಎರಡೂ ದಿನಗಳವರೆಗೆ ವರೂರು ಎಂಜಿನಿಯರಿಗ್ ಕಾಲೇಜಿನಲ್ಲಿ ಆಯೋಜಿಸಿದ ವಾಲಿಬಾಲ್ ಪಂದ್ಯಾವಳಿಯ ಅಂತಿಮ ಸುತ್ತಿನಲ್ಲಿ ಚಿಕ್ಕೋಡಿಯ ಕೆ.ಎಲ್.ಇ ಎಂಜಿನಿಯರಿಂಗ್ ಮಹಾವಿದ್ಯಾಲಯವನ್ನು ಮಣಿಸಿ ವಿಡಿಐಟಿ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿತು. ಈ ಮೂಲಕ ಮೇ 7ರಂದು ತುಮಕೂರಿನ ಎಸ್.ಐ.ಟಿ ಮಹಾವಿದ್ಯಾಲಯದಲ್ಲಿ ಆರಂಭಗೊಳ್ಳುವ ರಾಜ್ಯಮಟ್ಟದ ಪಂದ್ಯಾವಳಿಯಲ್ಲಿ ಭಾಗವಹಿಸುವ ಅರ್ಹತೆ ಪಡೆದುಕೊಂಡಿದೆ.

ವಿಡಿಐಟಿ ವಾಲಿಬಾಲ್ ತಂಡವನ್ನು ಶೀತಲ್, ಆಕಾಶ್, ಪ್ರಜ್ವಲ್, ನ್ಯೂಮನ್, ಕಾರ್ತಿಕ್, ನಿಖಿಲ್, ರಿಹಾನ್ನಕ್ಷ, ಕಾರ್ತಿಕ್ ಜಿ, ಪೃಥ್ವಿ, ದಿನೇಶ್, ಅಕೀಬ್ ಅಹ್ಮದ್, ಮಹಮದ್ ಉಜೆಫಾ ಮೊದಲಾದವರು ಪ್ರತಿನಿಧಿಸಿದ್ದರು.



ಯಲ್ಲಾಪುರ ತಾಲೂಕಿನ ಬೀಗಾರಿನಲ್ಲಿ ನವೋದಯ ಯುವಕ ಸಂಘದಿಂದ ಭಾನುವಾರ ಧನಿಕರ ದೌರ್ಜನ್ಯ ಎಂಬ ನಾಟಕ ಪ್ರದರ್ಶನವಾಯಿತು. ಕಳಚೆ, ಬಾಗಿನಕಟ್ಟಾ, ನಂದೊಳ್ಳಿ, ಮಲವಳ್ಳಿ ಮತ್ತು ಯಲ್ಲಾಪುರ ಸುತ್ತಮುತ್ತಲಿನ ಜನರು ನಾಟಕ ನೋಡಿ ಕಲೆಗೆ ಪ್ರೋತ್ಸಾಹ ನೀಡಿದರು.

12ರಂದು ರಸ್ತೆ ತಡೆದು ಪ್ರತಿಭಟನೆ

ಶಿರಸಿ: ಶಿರಸಿ-ಹಾವೇರಿ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ವಿಳಂಬ ನೀತಿ ಖಂಡಿಸಿ ಮೇ 12ರಂದು ಚೇಪಗಿ ಚೆಕ್ ಪೋಸ್ಟ್ ನಲ್ಲಿ ರಸ್ತೆ ತಡೆದು ಹೋರಾಟ ಮಾಡಲಾಗುವುದು ಎಂದು ಸಾಮಾಜಿಕ ಹೋರಾಟಗಾರ ವಿಶ್ವನಾಥ್ ಗೌಡ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಗರ ಮಾಲಾ ಯೋಜನೆಯಡಿ ಕೈಗೆತ್ತಿಕೊಂಡಿರುವ ಕಾಮಗಾರಿಯ ವಿಳಂಬದಿಂದ ಪ್ರತಿನಿತ್ಯ ಸಾರ್ವಜನಿಕರು ನರಕಯಾತನೆ ಅನುಭವಿಸುತ್ತಿದ್ದಾರೆ. ಈಗಾಗಲೇ ನಾವು ಸಂಬಂಧಿಸಿದ ಗುತ್ತಿಗೆದಾರರ ಮೇಲೆ ಎಫ್‌ಐಆರ್‌ದಾಖಲಿಸಿದರೂ ಇದುವರೆಗೆ ಯಾವುದೇ ಕ್ರಮ ಜರುಗಿಸಿಲ್ಲ. ರಸ್ತೆಗೆ ಸರಿಯಾಗಿ ನೀರು ಸಿಂಪಡಣೆ ಮಾಡುತ್ತಿಲ್ಲ. ರಸ್ತೆಯ ಅಕ್ಕಪಕ್ಕದಲ್ಲಿರುವ ವಿದ್ಯುತ್ ಕಂಬಗಳನ್ನು ಸರಿಯಾದ ರೀತಿಯಲ್ಲಿ ಸ್ಥಳಾಂತರಿಸಿಲ್ಲ. ಇಷ್ಟಾದರೂ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಒಂದೂ ಸಭೆ ಮಾಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮೇ 12ರಂದು ಚೇಪಗಿ ಚೆಕ್ ಪೋಸ್ಟ್‌ನಲ್ಲಿ ಶಿರಸಿ-ಹಾವೇರಿ ರಾಷ್ಟ್ರೀಯ ಹೆದ್ದಾರಿಯ ವೈಜ್ಞಾನಿಕ ಕಾಮಗಾರಿ ಕುರಿತು ಮತ್ತು ವಿಳಂಬ ಧೋರಣೆ ವಿರೋಧಿಸಿ ಹಲವಾರು ಸಂಘ-ಸಂಸ್ಥೆಗಳು ಸೇರಿಕೊಂಡು ರಸ್ತೆ ತಡೆದು ಉಗ್ರ ಹೋರಾಟ ಮಾಡುತ್ತೇವೆ ಎಂದರು. ಈ ವೇಳೆ ವಿನಾಯಕ ಶೆಟ್ಟಿ, ಮಹೇಶ್ ನಾಯ್ಕ, ಅಬ್ದುಲ್ ಬಸೀರ್, ನಜೀರ್ ಸೇರಿದಂತೆ ಅನೇಕರು ಇದ್ದರು.

